# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | | 540 |
| ಸದಸ್ಯರ ಹೆಸರು | : | ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 13-12-2018 |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಗಳು |

| ಪ್ರಶ್ನೆ | | ಉತ್ತರ |
|---|---|---|
| (ಅ) | ಕೊಳ್ಳೆಗಾಲ ತಾಲ್ಲೂಕು, ಹನ್ನೂರು ಕ್ಷೇತ್ರದ, ಶತಮಾನ ಕಂಡ ಮಧುವನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯು ದುಸ್ಥಿತಿಯಲ್ಲಿದ್ದು, ಪಾಳು ಬಿದ್ದಿರುವುದು, ರಾತ್ರಿ ವೇಳೆ ಅನೈತಿಕ ಚಟುವಟಿಕೆಗಳ ತಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೊಳ್ಳೆಗಾಲ ತಾಲ್ಲೂಕು, ಹನ್ನೂರು ಕ್ಷೇತ್ರದ, ಮಧುವನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| (ಆ) | ಒಂದು ಎಕರೆ ಜಾಗದಲ್ಲಿರುವ ಈ ಶಾಲೆ ಪ್ರಖ್ಯಾತವಾದ ಶಾಲೆಯಾಗಿದ್ದು, ಈ ಶಾಲೆಯಲ್ಲಿ 300 ಕ್ಕೂ ಹೆಚ್ಚು ಮಕ್ಕಳು ಓದುತ್ತಿದ್ದು, ಇರುವ 5 ಕೊಠಡಿಗಳು ಶಿಥಿಲ ಬೀಳುವ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಇ) | ಈ ಶಾಲೆಯನ್ನು ಕೂಡಲೇ ದುರಸ್ಥಿಗೊಳಿಸಿ ಮಾದರಿ ಶಾಲೆಯನ್ನಾಗಿ ಮಾಡಲು ಕ್ರಮ ಜರುಗಿಸಲಾಗುವುದೇ ? | ಕೊಳ್ಳೆಗಾಲ ತಾಲ್ಲೂಕು, ಹನ್ನೂರು ಕ್ಷೇತ್ರದ, ಮಧುವನಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯನ್ನು ದುರಸ್ಥಿಗೊಳಿಸಲು 2018-19ನೇ ಸಾಲಿನಲ್ಲಿ ರೂ.5.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಅಲ್ಲದೆ, 'ವಿಶೇಷ ಪ್ಯಾಕೇಜ್' ಯೋಜನೆಯಡಿ ಹೆಚ್ಚುವರಿ ಒಂದು ಕೊಠಡಿ ನಿರ್ಮಾಣಕ್ಕಾಗಿ ರೂ 10.60 ಲಕ್ಷಗಳನ್ನು ಮಂಜೂರು ಮಾಡಿ ಶೇ.50 ರಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ. |

ಇಡಿ 326 ಯೋಸಕ 2018

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ